NOVEMBER 20, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಾಜ್ಯದ ನಗರ ಹಾಗೂ ಪಟ್ಟಣ ಪ್ರದೇಶಗಳನ್ನು ಸ್ವಚ್ಛವಾಗಿಡಲು, ಸುಂದರವಾಗಿಸಲು, ಆರೋಗ್ಯವಂತ ಸಮಾಜ ನಿರ್ಮಿಸಲು, 53 ಒಣ ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ತೆರೆಯಲಾಗುತ್ತಿದೆ ಹಾಗೂ ಸ್ವಚ್ಛತಾ ಸಾರಥಿ ವಾಹನಗಳನ್ನು, ವಿತರಿಸಲಾಗುತ್ತಿದೆ ಎಂದು, ನಗರಾಭಿವೃದ್ಧಿ ಖಾತೆ ಸಚಿವ, ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ, ತಿಳಿಸಿದ್ದಾರೆ. ಬೆಂಗಳೂರಿನ, ಜವಹರಲಾಲ್ ನೆಹರೂ ತಾರಾಲಯದ ಸಭಾಂಗಣದಲ್ಲಿ, ರಾಜ್ಯದ ವಿವಿಧೆಡೆ ನಿರ್ಮಿಸಿರುವ, 16 ಇಂದಿರಾ ಕ್ಯಾಂಟೀನ್‌ಗಳು, ಸ್ವಚ್ಛ ಭಾರತ್ ಮಿಷನ್ ನಗರ ಯೋಜನೆಯಡಿ, ಕಾಮಗಾರಿಗಳು ಹಾಗೂ ಯಂತ್ರೋಪಕರಣಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ, ಮುಖ್ಯಮಂತ್ರಿಗಳೊಂದಿಗೆ ಪಾಲ್ಗೊಂಡು, ಅವರು ಮಾತನಾಡಿದರು.

<><><>

ಕಲಬುರಗಿ ಜಿಲ್ಲೆ, ಅಫಜಲಪುರ ತಾಲೂಕಿನಲ್ಲಿ ಪ್ರಜಾಸೌಧ, ತಾಲ್ಲೂಕು ಆಡಳಿತ ಕೇಂದ್ರ ಕಟ್ಟಡದ, ಎರಡನೇ ಹಂತದ ಕಾಮಗಾರಿಗೆ, 5 ಕೋಟಿ ರೂಪಾಯಿ ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಾಕ್ಟರ ಜಿ. ಪರಮೇಶ್ವರ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಸಚಿವ ಸಂಪುಟ ಸಭೆ ನಿರ್ಣಯಗಳ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಕೃಷಿಯನ್ನು ಲಾಭದಾಯಕ ಉದ್ಯಮವಾಗಿಸುವ ನಿಟ್ಟಿನಲ್ಲಿ, 'ಮುಖ್ಯಮಂತ್ರಿ ಕೃಷಿ ವಿಸ್ತಾರ', ಯೋಜನೆಯನ್ನು ಮುಂದಿನ ವರ್ಷಗಳಲ್ಲಿ, 75 ಕೋಟಿ ರೂಪಾಯಿ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ ಎಂದಿದ್ದಾರೆ.

<><><>

ಕೃಷ್ಣ, ಘಟಪ್ರಭಾ ಮತ್ತು ಮಲಪ್ರಭಾ ನದಿಗಳು, ಆಲಮಟ್ಟಿ ಜಲಾಶಯ, ಬ್ಯಾರೇಜ್‌ಗಳು, ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳು, ಹಾಗೂ ಅಂತರ್ಜಲ ಮೂಲಗಳನ್ನು ಅವಲಂಬಿಸಿರುವ, ಬಾಗಲಕೋಟೆ ಜಿಲ್ಲೆಯಲ್ಲಿ, ಲಭ್ಯ ನೀರಿನ ಹಿತಮಿತ ಬಳಕೆ ಅನಿವಾರ್ಯ ಎಂದು, ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು.

<><><>

ಗದಗ ಜಿಲ್ಲೆ, ಲಕ್ಷ್ಮೇಶ್ವರ ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ, ಇಂದು ಮತ್ತು ನಾಳೆ, 'ಕಾಗ್ನಿಟಿವ್ ಕಂಪ್ಯೂಟಿಂಗ್ ಮತ್ತು ಜನರೇಟಿವ್ ಎ.ಐ'– 2026, ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ ಆಯೋಜಿತವಾಗಿದೆ. ಸಮ್ಮೇಳನದ, ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾಕ್ಟರ ಪರಶುರಾಮ ಬಾರಕಿ.

<><><>

ಡಾಕ್ಟರ ಪರಶುರಾಮ ಬಾರಕಿ ಧ್ವನಿ– 42 ಸೆಕೆಂದುಗಳು

<><><>

ಕೊಡಗು ಜಿಲ್ಲೆಯಲ್ಲಿ, 36 ಸಾವಿರದ 273 ಮಧುಮೇಹಿಗಳನ್ನು, ಚಿಕಿತ್ಸಾ ಅನುಸರಣೆಗೆ ಒಳಪಡಿಸಲಾಗಿದ್ದು, 30 ಸಾವಿರದ 897 ಜನ, ತಮ್ಮ ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು, ನಿಯಂತ್ರಣದಲ್ಲಿಟ್ಟುಕೊಂಡಿದ್ದಾರೆ ಎಂದು, ಜಿಲ್ಲಾ ಸರ್ವೇಕಣಾಧಿಕಾರಿ, ಡಾಕ್ಟರ್ ಶ್ರೀನಿವಾಸ ತಿಳಿಸಿದ್ದಾರೆ. ಕೊಡಗು ಜಿಲ್ಲೆಯಲ್ಲಿ, 30 ವರ್ಷ ಮೇಲ್ಪಟ್ಟವರ ಆರೋಗ್ಯ ತಪಾಸಣೆ, ಮಧುಮೇಹದ ಆರಂಭಿಕ ಪತ್ತೆ ಹಾಗೂ ನಿರಂತರ ಚಿಕಿತ್ಸೆಗೆ ಆದ್ಯತೆ ನೀಡಲಾಗಿದೆ. 7 ಸಾವಿರದ 79 ಜನರಲ್ಲಿ, ಅಧಿಕ ರಕ್ತದೊತ್ತಡ ಪತ್ತೆ ಹಚ್ಚಿ, ಚಿಕಿತ್ಸೆ ಆರಂಭಿಸಲಾಗಿದೆ ಎಂದು, ಅವರು ಮಾಹಿತಿ ನೀಡಿದ್ದಾರೆ.

<><><>

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ, ಮಧು ಬಂಗಾರಪ್ಪ ಅವರು ಇಂದು ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

<><><>

ಬೆಂಗಳೂರಿನಲ್ಲಿ ನಡೆದ, 5ನೇ ರಾಜ್ಯ ಮಟ್ಟದ ಮಿನಿ ಓಲಂಪಿಕ್ಸ್ ನಲ್ಲಿ, ಬಾಗಲಕೋಟೆಯ, ಜಿಲ್ಲಾ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳು, ಸೈಕ್ಲಿಂಗ್ ಹಾಗೂ ಕುಸ್ತಿ ಸ್ಪರ್ಧೆಗಳಲ್ಲಿ, ಒಟ್ಟು 14 ಪದಕಗಳನ್ನು ಗೆದ್ದಿದ್ದಾರೆ.

<><><>

'ರಾಷ್ಟ್ರೀಯ ಏಕತಾ ಸಪ್ತಾಹ ದಿವಸ'ದ ಪ್ರತಿಜ್ಞಾ ವಿಧಿಯನ್ನು, ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಕೊಪ್ಪಳ ಜಿಲ್ಲೆ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಬೋಧಿಸಿದರು.

<><><>

ಯುಜಿಸಿ–ನೆಟ್ ಪರೀಕ್ಷೆ, ಡಿಸೆಂಬರ್ 14 ರಿಂದ 21ನೇ ತಾರೀಖಿನ ವರೆಗೆ ನಡೆಯಲಿವೆ. ಮೊದಲ ಪರೀಕ್ಷೆ ಬೆಳಗ್ಗೆ 9 ರಿಂದ ಮಧ್ಯಾಹ್ನ 12 ಗಂಟೆಯ ವರೆಗೆ, ಎರಡನೇ ಪರೀಕ್ಷೆ ಮಧ್ಯಾಹ್ನ 3 ರಿಂದ ಸಂಜೆ 6

ಗಂಟೆಯ ವರೆಗೆ, ಇರಲಿದೆ. ಪರೀಕ್ಷಾ ಕೇಂದ್ರದ ಮಾಹಿತಿ, ಪರೀಕ್ಷಾ ದಿನಾಂಕದ 21 ದಿನಗಳ ಮೊದಲು, ಯು.ಜಿ.ಸಿ. ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದು, ತಿಳಿಸಲಾಗಿದೆ.

<><><>

ರಾಜ್ಯದ ಸರ್ಕಾರಿ ಇಲಾಖೆಗಳಲ್ಲಿ, ನೇಮಕಾತಿ ಅಧಿಸೂಚನೆ ಹೊರಡಿಸುವ ಮುನ್ನ, ವಿಶೇಷಚೇತನರಿಗೆ ಶೇಕಡ 5ರಷ್ಟು ಹುದ್ದೆಗಳನ್ನು ಮೀಸಲಿರಿಸಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ, ದೃಢೀಕರಿಸಿದ ಮಾಹಿತಿ ಕಡ್ಡಾಯವಾಗಿ ಸಲ್ಲಿಸುವಂತೆ, ರಾಜ್ಯ ಮುಖ್ಯ ಕಾರ್ಯದರ್ಶಿ, ಶಾಲಿನಿ ರಜನೀಶ ನಿರ್ದೇಶಿಸಿದ್ದಾರೆ. ವಿಶೇಷಚೇತನರ ಹಕ್ಕುಗಳ ಕಾಯ್ದೆ 2016 ಹಾಗೂ ಉಚ್ಚ ನ್ಯಾಯಾಲಯದ ನಿರ್ದೇಶನಗಳನ್ನು ಪಾಲಿಸಲು, ಉನ್ನತ ಮಟ್ಟದ ಸಭೆಯಲ್ಲಿ, ತೀರ್ಮಾನಿಸಲಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>